# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 489(709) |
| ಸದಸ್ಯರ ಹೆಸರು | : | ಶ್ರೀ ಕೆ ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 22.07.2024. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು. |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ದಾವಣಗೆರೆ, ಚಿತ್ರದುರ್ಗ ಮತ್ತು ರಾಣೆಬೆನ್ನೂರು ಜಿಲ್ಲೆಗಳಲ್ಲಿನ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆಯಿಂದಾಗಿ ಇಲ್ಲಿಯವರೆಗೂ ಖಾಲಿಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)</td><td>ದಾವಣಗೆರೆ, ಚಿತ್ರದುರ್ಗ ಮತ್ತು ರಾಣೆಬೆನ್ನೂರು ಜಿಲ್ಲೆಗಳಲ್ಲಿನ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆಯಿಂದಾಗಿ ಇಲ್ಲಿಯವರೆಗೂ ಖಾಲಿಯಾಗಿರುವ ಹುದ್ದೆಗಳ ಸಂಖ್ಯೆ ಈ ಕೆಳಕಂಡಂತಿದೆ:-
<table>
<tr><th></th><th>ಪ್ರೌಢಶಾಲೆ</th><th>ಪದವಿಪೂರ್ವ ಕಾಲೇಜು</th></tr>
<tr><td>ದಾವಣಗೆರೆ</td><td>265</td><td>110</td></tr>
<tr><td>ಚಿತ್ರದುರ್ಗ</td><td>361</td><td>92</td></tr>
<tr><td>ರಾಣೆಬೆನ್ನೂರು</td><td>75</td><td>29</td></tr>
</table></td></tr>
<tr><td>ಆ)</td><td>ಸದರಿ ಅವಧಿಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;</td><td rowspan="3">ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:01.01.2016 ರಿಂದ 31.12.2020ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.</td></tr>
<tr><td>ಇ)</td><td>ಹಾಗಿದ್ದಲ್ಲಿ, ಸದರಿ ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲು ಅನುಮತಿ ನೀಡಲಾಗುವುದು;</td></tr>
<tr><td>ಈ)</td><td>ಸದರಿ ಅವಧಿಯಲ್ಲಿ ಖಾಲಿಯಿರುವ ಹುದ್ದೆಗಳಿಗೆ ಅನುಮತಿ ನೀಡದೆ, ಕೇವಲ ಹುದ್ದೆಗಳಿಗೆ ಅನುಮೋದನೆ ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ?</td></tr>
</table>

ಸಂಖ್ಯೆ: ಇಪಿ 222 ಎಸ್‌ಇಎಸ್ 2024

(ಎಸ್. ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು